ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 793
ಮಾನ್ಯ ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 20-12-2021
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

* * *

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ 692 ತಜ್ಞ ವೈದ್ಯರ ಮತ್ತು 1048 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಿದ್ದು, ಇದರಲ್ಲಿ ಆಯ್ಕೆಯಾಗಿರುವ ಎಷ್ಟು ಮಂದಿ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಉನ್ನತ ವ್ಯಾಸಂಗದ ಕಾರಣ ನೀಡಿ ಕರ್ತವ್ಯಕ್ಕೆ ಹಾಜರಾಗಲು ನಿಗಧಿಪಡಿಸಿದ ಕೊನೆ ದಿನವನ್ನು (16 ಜೂನ್ 2021 ವಿಸ್ತರಿಸಿ ಇನ್ನಷ್ಟು ಕಾಲಾವಕಾಶ ನೀಡುವಂತೆ ಮನವಿ ಮಾಡಿರುತ್ತಾರೆಯೇ; (ಸಂಪೂರ್ಣ ವಿವರ ನೀಡುವುದು)	ಉನ್ನತ ವ್ಯಾಸಂಗದ ಕಾರಣ ನೀಡಿ ಕರ್ತವ್ಯಕ್ಕೆ ಹಾಜರಾಗಲು ನಿಗದಿಪಡಿಸಿದ ಕೊನೆ ದಿನವನ್ನು ವಿಸ್ತರಿಸಿ ಇನ್ನಷ್ಟು ಕಾಲಾವಕಾಶ ನೀಡುವಂತೆ 03 ತಜ್ಞ ವೈದ್ಯರು ಮತ್ತು 16 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮನವಿ ಮಾಡಿರುತ್ತಾರೆ.
ಆ	ಇವರ ಮನವಿಗಳನ್ನು ಪರಿಗಣಿಸಲು ನಿಯಮಗಳಲ್ಲಿ ಅವಕಾಶವಿದೆಯೇ; ಹಾಗಿದ್ದಲ್ಲಿ, ಇವರುಗಳು ಕರ್ತವ್ಯಕ್ಕೆ ಹಾಜರಾಗಲು ಅವಕಾಶ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 18(2) ರನ್ವಯ ಮನವಿಗಳನ್ನು ಪರಿಗಣಿಸಲು ನಿಯಮಗಳಲ್ಲಿ ಅವಕಾಶವಿದ್ದು, ವೈದ್ಯರ ಮನವಿಗಳನ್ನು ಪರಿಗಣಿಸಿ ಕರ್ತವ್ಯಕ್ಕೆ ಹಾಜರಾಗಲು ಅವಕಾಶ ಕಲ್ಪಿಸಲು ಕಾಲಾವಧಿಯನ್ನು ವಿಸ್ತರಿಸಲಾಗಿದೆ.

ಕಡತ ಸಂಖ್ಯೆ: ಆಕುಕ 793 ಚುರಪ್ರ 2021

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು